**ಕರ್ನಾಟಕ ಸರ್ಕಾರ**

ಸಂಖ್ಯೆ:ಲೋಇ 111 ಸಿಆರ್‌ಎಂ 2005(1)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:09-8-2005.

**ಸುತ್ತೋಲೆ**

ವಿಷಯ: ರಾಜ್ಯದ ಹೆದ್ದಾರಿಗಳಲ್ಲಿ ಒಕ್ಕಣೆ ಮಾಡುವುದನ್ನು ತಡೆಯುವ ಬಗ್ಗೆ.

ರಾಜ್ಯದ ಹೆದ್ದಾರಿಗಳಲ್ಲಿ ಅನೇಕ ಕಡೆ ಕುಯಿಲು ಮಾಡಿದ ತೆನೆಗಳನ್ನು ಮತ್ತು ಹುಲ್ಲನ್ನು ಹಾಕಿ ರಸ್ತೆಗಳಲ್ಲಿ ಸಾಗುವ ವಾಹನಗಳ ಅಡಿಯಲ್ಲಿ ಒಕ್ಕಣೆ ಮಾಡುವುದು ಬಹು ಸಾಮಾನ್ಯವಾಗಿರುತ್ತದೆ. ರಸ್ತೆಯ ಮೇಲೆ ಒಕ್ಕಣೆ ಮಾಡುವ ಚಟುವಟಿಕೆಗಳಿಂದ ರೈತಾಪಿ ಜನಗಳಿಗೆ ರಸ್ತೆಗಳನ್ನು ಉಪಯೋಗಿಸುವುದು ಅಪಾಯಕರವಾಗಿದ್ದು ಪ್ರಾಣ ಹಾನಿಯಾಗುವ ಸಂಭವವೂ ಇರುತ್ತದೆ. ಇದರಿಂದ ವಾಹನ ಸಂಚಾರಕ್ಕೆ ತೊಂದರೆಯುಂಟಾಗುತ್ತಿದ್ದು ಅಪಘಾತಗಳು ಹೆಚ್ಚಾಗುವ ಸಂಭವವಿರುತ್ತದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಮತ್ತು ರಸ್ತೆಯಲ್ಲಿ ಉಂಟಾಗುವ ಅಪಘಾತಗಳನ್ನು ಕಡಿಮೆ ಮಾಡುವ ದೃಷ್ಟಿಯಿಂದ ರಸ್ತೆಯ ಮೇಲೆ ಒಕ್ಕಣೆ ಮಾಡುವುದನ್ನು ಕೂಡಲೇ ನಿಲ್ಲಿಸಬೇಕಾಗಿರುತ್ತದೆ. ರಾಷ್ಟ್ರೀಯ ಹೆದ್ದಾರಿ ಕಾಯ್ದೆ ಪ್ರಕಾರ ಸಂಬಂಧಪಟ್ಟ ಕಾರ್ಯಪಾಲಕ ಇಂಜಿನಿಯರ್‌ಗಳು ಆಯಾ ಹೆದ್ದಾರಿಗಳ ಪ್ರಾಧಿಕಾರಿಗಳು ಸಹ ಆಗಿದ್ದು ಯಾವುದೇ ಹೆದ್ದಾರಿಯಲ್ಲಿ ಒಕ್ಕಣೆ ಮಾಡದಂತೆ ತಡೆಗಟ್ಟುವುದು ಮತ್ತು ರಾಜ್ಯದ ರಸ್ತೆಗಳಲ್ಲಿ ಒಕ್ಕಣೆ ಮಾಡುವುದು ಕಂಡುಬಂದಲ್ಲಿ ಸಂಬಂಧಪಟ್ಟ ಹೆದ್ದಾರಿ ಅಧಿಕಾರಿಗಳು ಅದನ್ನು ತೆಗೆಸಲು ತಕ್ಷಣ ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗಿದೆ. ಅವಶ್ಯವಿದ್ದಲ್ಲಿ ಸ್ಥಳೀಯ ಪೋಲೀಸರ ಸಹಾಯವನ್ನು ಸಹ ಪಡೆಯಬಹುದಾಗಿದೆ.

(ಟಿ.ಸುಕುಮಾರ್)
ಸರ್ಕಾರದ ಕಾರ್ಯದರ್ಶಿ,
ಲೋಕೋಪಯೋಗಿ ಇಲಾಖೆ

ಇವರಿಗೆ:

1. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು
2. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಉತ್ತರ), ಧಾರವಾಡ.
3. ಮುಖ್ಯ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿಗಳು, ಬೆಂಗಳೂರು
4. ಎಲ್ಲಾ ಅಧೀಕ್ಷಕ ಇಂಜಿನಿಯರ್‌ಗಳಿಗೆ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಲೋಕೋಪಯೋಗಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ.